**ದಿನಾಂಕಃ 25-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು .**

**ಮುಂದುವರೆದ ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ**

| | | |
|---|---|---|
| ನಿ.ಪಿ-1 | : | ಅಂಗನ್ಯೂನ್ಯತೆ ಪ್ರಮಾಣ ಪತ್ರ |
| ನಿ.ಪಿ-2 | : | ಮಂಜೂರಾತಿ ಆದೇಶದ ಪತ್ರ |
| ನಿ.ಪಿ-3 | : | ಬಿಡುಗಡೆ ಪ್ರಮಾಣ ಪತ್ರ |

ಎಂದು ಗುರುತಿಸಲಾಯಿತು.

ಅರ್ಜಿಯಲ್ಲಿ ಬೇಡಿದಂತೆ ಆದೇಶ ಆಗಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ .

**ಪಾಟೀ ಸವಾಲುಃ 1 ನೇ ಎದುರುದಾರರ ಪರ ವಕೀಲರಿಂದಃ**

1. ನನಗೆ ಕಣ್ಣು ಕಾಣದ ಕಾರಣ ನಾನು ಏನೂ ಕೆಲಸ ಮಾಡುವುದಿಲ್ಲ. ಓ.ಎಸ್ ನಂಃ 251/2014 ರ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ನನಗೆ ಎಲ್ಲಾ ಮಾಹಿತಿ ಇದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ತಯಾರಿಸಲು ನಾನೇ ಮಾಹಿತಿ ಕೊಟ್ಟಿರುತ್ತೇನೆ. ನಾನು ಆರ್ಥಿಕವಾಗಿ ಚೆನ್ನಾಗಿರುತ್ತೇನೆ ಎಂದರೆ ಸರಿಯಲ್ಲ. ನಾನು ದಾಖಲೆಗಳನ್ನು ಸೃಷ್ಠಿ ಮಾಡಿ ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟಿ ಸವಾಲುಃ** 2 ನೇ ಎದುರುದಾರರ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/-

1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ ರಾಣೇಬೆನ್ನೂರು.